# ಪ್ರಕಟಣೆ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಮಹಾನಗರ ಪಾಲಿಕೆ ಕಛೇರಿಗಳು, ನರಸಿಂಹರಾಜ ಚೌಕ, ಬೆಂಗಳೂರು–560002**

## ಬ್ಯಾಕ್‌ಲಾಗ್ ಹುದ್ದೆಗಳ ಅಧಿಸೂಚನೆ

**ಅಧಿಸೂಚನೆ ಸಂಖ್ಯೆ: ಬಿ12(3)ಪಿ.ಆರ್/333/2006–07** **ದಿನಾಂಕ:31–12–2014**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ಇಲಾಖೆಗಳಲ್ಲಿ ಈ ಕೆಳಗೆ ನಮೂದಿಸಿರುವ ವಿವಿಧ ವೃಂದಗಳಲ್ಲಿ ಖಾಲಿ ಇರುವ **ಬ್ಯಾಕ್‌ಲಾಗ್ ಹುದ್ದೆಗಳನ್ನು** ನೇರ ನೇಮಕಾತಿಯಿಂದ ಖಾಯಂ ಆಗಿ ಭರ್ತಿ ಮಾಡುವ ಬಗ್ಗೆ ಈ ಕೆಳಗೆ ನಮೂದಿಸಿರುವ ಷರತ್ತುಗಳು ಒಳಗೊಂಡಂತೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಸಹಾಯಕ ಆಯುಕ್ತರು (ನೇಮಕಾತಿ ಮತ್ತು ವಿಚಾರಣೆ) ರವರ ಕಛೇರಿ, ಅನೆಕ್ಸ್ ಬಿಲ್ಡಿಂಗ್–2, 3ನೇ ಮಹಡಿ, ಎನ್.ಆರ್.ಚೌಕ, ಬೆಂಗಳೂರು–560002, **ದಿನಾಂಕ: 31–01–2015** ರಂದು ಅಥವಾ ಅದಕ್ಕೂ ಮುಂಚಿತವಾಗಿ ತಲುಪುವಂತೆ **ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸುವುದು**. ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಮಹಾನಗರಪಾಲಿಕೆಯ ಆಯುಕ್ತರವರಿಗೆ ಅಧಿಕಾರವಿರುತ್ತದೆ. ಅರ್ಜಿಗಳನ್ನು ಮುದ್ದಾಂ ಸ್ವೀಕರಿಸಲಾಗುವುದಿಲ್ಲ.

| ಕ್ರ ಸಂ | ಹುದ್ದೆಯ ಹೆಸರು | ವಿದ್ಯಾರ್ಹತೆ | ಹುದ್ದೆಗಳ ಸಂಖ್ಯೆ | ವರ್ಗೀಕರಣ | | | | | | | | ವೇತನ ಶ್ರೇಣಿ |
|---|---|---|---|---|---|---|---|---|---|---|---|---|
| | | | | | ಇ | ಮ | ಗ್ರಾ | ಅಂ.ವಿ | ಮಾ. ಸೈ | ಕ. ಮಾ.ಅ | ಯೋ. ನಿರಾ. | |
| 01 | ಪ್ರಥಮ ದರ್ಜೆ ಸಹಾಯಕರು | ಅಂಗೀಕೃತ ವಿಶ್ವವಿದ್ಯಾಲಯ ದಿಂದ ಯಾವುದೇ ಬ್ಯಾಚುಲರ್ ಪದವಿಯಲ್ಲಿ ಉತ್ತೀರ್ಣ ರಾಗಿರಬೇಕು. | **02** | ಪ.ಪಂ | 01 | –– | 01 | –– | –– | –– | –– | 14550–26700 |
| 02 | ದ್ವಿತೀಯ ದರ್ಜೆ ಸಹಾಯಕರು | ದ್ವಿತೀಯ ಪಿ.ಯು.ಸಿ ಉತ್ತೀರ್ಣರಾಗಿರಬೇಕು. | **03** | ಪ.ಪಂ | 01 | –– | 02 | –– | –– | –– | –– | 11600–21000 |
| 03 | ಶುಶ್ರೂಷಕಿಯರು | NCI ನಿಂದ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಜನರಲ್ ನರ್ಸಿಂಗ್‌ನಲ್ಲಿ ಡಿಪ್ಲೋಮಾ ಅಥವಾ ಬಿ.ಎಸ್ಸಿ ಪದವಿಯನ್ನು ಪಡೆದಿರಬೇಕು. | **01** | ಪ.ಜಾ | –– | –– | –– | 01 | –– | –– | –– | 17650–36000 |
| 04 | ಎ.ಎನ್.ಎಂ | ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಲ್ಲಿ ಆಕ್ಸಿಲರಿ ನರ್ಸ್/ ಮಿಡ್‌ವೈಫ್ ತರಬೇತಿ ಅಥವಾ ಮಿಡ್‌ವೈಫರಿ ತರಬೇತಿಯನ್ನು ಪಡೆದಿರಬೇಕು. | **01** | ಪ.ಜಾ | 01 | –– | –– | –– | –– | –– | –– | 12500–24000 |
| 05 | ಶಿಕ್ಷಕರು(ನರ್ಸರಿ) | 1. ದ್ವಿತೀಯ ಪಿ.ಯು.ಸಿ.ಯಲ್ಲಿ ಉತ್ತೀರ್ಣರಾಗಿರಬೇಕು 2. ನರ್ಸರಿ ತರಬೇತಿ ಪಡೆದಿರಬೇಕು & ಕಾರ್ಯಾನುಭವ ಹೊಂದಿರಬೇಕು. | **02** | ಪ.ಜಾ | –– | –– | –– | 01 | –– | –– | –– | 12500–24000 |
| | | | | ಪ.ಪಂ | –– | –– | –– | 01 | –– | –– | –– | |

| ಕ್ರ.<br>ಸಂ | ಹುದ್ದೆಯ ಹೆಸರು | ವಿದ್ಯಾರ್ಹತೆ | ಹುದ್ದೆ<br>ಗಳ<br>ಸಂಖ್ಯೆ | ವರ್ಗೀಕರಣ | | | | | | | | ವೇತನ<br>ಶ್ರೇಣಿ |
|---|---|---|---|---|---|---|---|---|---|---|---|---|
| | | | | | ಇ | ಮ | ಗ್ರಾ | ಅಂ | ಮಾ.<br>ಸೈ | ಕ.<br>ಮಾ.ಅ | ಯೋ<br>.ನಿರಾ, | |
| 06 | ವೈರ್‌ಮೆನ್ | 1. ದ್ವಿತೀಯ ಪಿ.ಯು.ಸಿ. ಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ<br>2. ಐ.ಟಿ.ಐ ಎಲೆಕ್ಟ್ರೀಕಲ್ ಕೋರ್ಸ್‌ನಲ್ಲಿ ಉತ್ತೀರ್ಣರಾಗಿರ ಬೇಕು ಮತ್ತು ಕಾರ್ಯಾನುಭವ ಹೊಂದಿರ ಬೇಕು. | **03** | ಪ.ಜಾ | 01 | 01 | –– | –– | –– | –– | –– | 11600–21000 |
| | | | | ಪ.ಪಂ | 01 | –– | –– | –– | –– | –– | –– | |
| 07 | ಫಾರ್ಮಾಸಿಸ್ಟ್ | ದ್ವಿತೀಯ ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕರ್ನಾಟಕ ರಾಜ್ಯ ಸರ್ಕಾರ ದಿಂದ ಮಾನ್ಯತೆ ಪಡೆದ ಸಂಸ್ಥೆ ಯಿಂದ ಫಾರ್ಮಾಸಿ ಡಿಪ್ಲೋಮಾ ಹೊಂದಿರಬೇಕು. | **01** | ಪ.ಪಂ | 01 | –– | –– | –– | –– | –– | –– | 14550–26700 |
| 08 | ಶೀಘ್ರಲಿಪಿಗಾರರು | 1. ದ್ವಿತೀಯ ಪಿ.ಯು.ಸಿ. ಯಲ್ಲಿ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ<br>2. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ & ಇಂಗ್ಲೀಷ್ ಶೀಘ್ರಲಿಪಿ ಪ್ರೌಢದರ್ಜೆ ಹಾಗೂ ಬೆರಳಚ್ಚು ಪ್ರೌಢದರ್ಜೆ ಯಲ್ಲಿ ಉತ್ತೀರ್ಣ ರಾಗಿರಬೇಕು.<br>3. ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ ಅನುಮೋದಿತ ಕಮರ್ಷಿ ಯಲ್ ಪ್ರಾಕ್ಟೀಸ್‌ನ 3ನೇ ವರ್ಷ ಅಥವಾ 4, 5, 6ನೇ ಸೆಮಿಸ್ಟರ್‌ಗಳಲ್ಲಿ ಕನ್ನಡ ಶೀಘ್ರಲಿಪಿ, ಬೆರಳಚ್ಚು ಹಾಗೂ ಇಂಗ್ಲೀಷ್ ಶೀಘ್ರಲಿಪಿ, ಬೆರಳಚ್ಚಿನಲ್ಲಿ ಉತ್ತೀರ್ಣರಾಗಿರಬೇಕು. ಕಮರ್ಷಿಯಲ್ ಪ್ರಾಕ್ಟೀಸ್‌ನಲ್ಲಿ ನಿಗದಿತ ಭಾಷೆಯಲ್ಲಿ ಬೆರಳಚ್ಚು & ಶೀಘ್ರಲಿಪಿ ಮಾಡಿರದಿದ್ದಲ್ಲಿ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ/ಇಂಗ್ಲೀಷ್ ಬೆರಳಚ್ಚು ಹಾಗೂ ಶೀಘ್ರಲಿಪಿ ಪ್ರೌಢದರ್ಜೇಯಲ್ಲಿ ಉತ್ತೀರ್ಣರಾಗಿರಬೇಕು.<br>4. ಶ್ರೀಘ್ರಲಿಪಿ ಪ್ರೊಫಿಷಿಯೆನ್ಸಿ ಗ್ರೇಡ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ನಿಗದಿತ ವಿದ್ಯಾರ್ಹತೆಯ ಒಟ್ಟು ಅಂಕಗಳ ಜೊತೆ **ಶೇಕಡ 5 ರಷ್ಟು** ಹೆಚ್ಚುವರಿ ಅಂಕಗಳನ್ನು ನೀಡಲಾಗು ವುದು. | **01** | ಪ.ಜಾ | –– | 01 | –– | –– | –– | –– | –– | 14550–26700 |

1. ಇ– ಇತರೆ, 2. ಮ– ಮಹಿಳೆ, 3. ಗ್ರಾ– ಗ್ರಾಮೀಣ, 4. ಅಂ.ವಿ– ಅಂಗವಿಕಲ 5. ಮಾ.ಸೈ–ಮಾಜಿ ಸೈನಿಕರು

6. ಕ.ಮಾ.ಅ– ಕನ್ನಡ ಮಾಧ್ಯಮ ಅಭ್ಯರ್ಥಿ 7. ಯೋ.ನಿರಾ– ಯೋಜನಾ ನಿರಾಶ್ರಿತರು

# <u>ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು</u>

1. **ಎಲ್ಲಾ ಹುದ್ದೆಗಳು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಗಳಿಗೆ ಮಾತ್ರ ಮೀಸಲಾಗಿರುತ್ತದೆ.**
2. **ಅರ್ಜಿಗಳನ್ನು ಅಂಚೆ ಅಥವಾ ಕೊರಿಯರ್ ಮೂಲಕ ಮಾತ್ರ ಕಳುಹಿಸತಕ್ಕದ್ದು. ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.**
3. **ವಯೋಮಿತಿ:** ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು

   **ಕನಿಷ್ಠ–18 ವರ್ಷಗಳು : ಗರಿಷ್ಠ – 40 ವರ್ಷಗಳು**

   ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

   ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಆಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಆಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

   ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

   ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

4. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
5. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿಯನ್ನು ಪಾಲಿಕೆಯ ವೆಬ್‌ಸೈಟ್ **www.bbmp.gov.in ಯಿಂದ Download ಮಾಡಿಕೊಳ್ಳುವುದು. ಅರ್ಜಿಗಳನ್ನು ಪಾಲಿಕೆಯಿಂದ ಒದಗಿಸಲಾಗುವುದಿಲ್ಲ. ಅರ್ಜಿಯನ್ನು ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಸಹಾಯಕ ಆಯುಕ್ತರು, ನೇಮಕಾತಿ ಮತ್ತು ವಿಚಾರಣೆ ವಿಭಾಗ, ಅನೆಕ್ಸ್ ಬಿಲ್ಡಿಂಗ್–2, 3ನೇ ಮಹಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಎನ್.ಆರ್.ಚೌಕ, ಬೆಂಗಳೂರು–560002 ಈ ವಿಳಾಸಕ್ಕೆ ಕಳುಹಿಸುವುದು**. ಲಕೋಟೆಯ ಮೇಲೆ **ಬ್ಯಾಕ್‌ಲಾಗ್ ಹುದ್ದೆಗಾಗಿ ಅರ್ಜಿ** ಎಂದು ಬರೆದು, ಸಲ್ಲಿಸುವ ಹುದ್ದೆಯ ಹೆಸರು ನಮೂದಿಸಿರಬೇಕು.
6. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
7. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.
8. ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವೊಂದನ್ನು ಅರ್ಜಿಯ ಬಲಗಡೆ ಮೇಲ್ಭಾಗದಲ್ಲಿ ಅಂಟಿಸಿ ಭಾವಚಿತ್ರದ ಮೇಲೆ ಸಹಿ ಮಾಡಿರಬೇಕು.
9. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
10. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
11. ಒಂದಕ್ಕಿಂತ ಹೆಚ್ಚು ಹುದ್ದೆಗೆ ಅರ್ಜಿಯನ್ನು ಸಲ್ಲಿಸಬಯಸುವ ಅಭ್ಯರ್ಥಿಗಳು ಪ್ರತ್ಯೇಕ ಹುದ್ದೆಗೆ ಪ್ರತ್ಯೇಕ ಅರ್ಜಿಯನ್ನು ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು.

12. ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಮತ್ತು ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

13. ಮೇಲಿನ ಹುದ್ದೆಗಳಿಗೆ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರು ಕಾಯ್ದಿರಿಸಿಕೊಂಡಿರುತ್ತಾರೆ.

14. 100/-ರೂ.ಗಳ **ನಿಗದಿತ ಇಂಡಿಯನ್ ಪೋಸ್ಟಲ್ ಆರ್ಡರ್ ಅನ್ನು ಆಯುಕ್ತರು, ಬೆಂಗಳೂರು ಮಹಾನಗರ ಪಾಲಿಕೆ, ಎನ್.ಆರ್.ಚೌಕ. ಬೆಂಗಳೂರು-560002** ರವರ ಹೆಸರಿಗೆ ಪಡೆದು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು. **ಪೋಸ್ಟಲ್ ಆರ್ಡರ್ ಮುಂದೆ ಹೆಸರು ಮತ್ತು ವಿಳಾಸವನ್ನು ನಮೂದಿಸತಕ್ಕದ್ದು.** ಪೋಸ್ಟಲ್ ಆರ್ಡರ್‌ಗಳನ್ನು ಲಗತ್ತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

15. ಸಹಿ ಮಾಡದಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

16. **ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು. (ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮಾತ್ರ)**

17. **ಅಂಚೆ ವಿಳಂಬಕ್ಕೆ ಪಾಲಿಕೆಯು ಜವಾಬ್ದಾರರಾಗುವುದಿಲ್ಲ.**

18. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು**

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳ ಪ್ರತಿಗಳನ್ನು ಅರ್ಜಿ ಸಲ್ಲಿಸುವ ದಿನಾಂಕದಂದು ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ ಪಡೆದು ಲಗತ್ತಿಸಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ನಿಯಮಾನುಸಾರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

- ಪ.ಜಾ/ಪ.ಪಂ ಸರ್ಕಾರದ ಅಧಿಸೂಚನೆ SWD.132.AD 97 dt:8.02.2000 ನಮೂನೆ-ಡಿ (ನಿಯಮ 3ಎ(2)(3)

**ಮೀಸಲಾತಿ ಪ್ರಮಾಣ ಪತ್ರಗಳು ಚಾಲ್ತಿಯಲ್ಲಿರಬೇಕು.**

19. **ಅಂಗವಿಕಲ ಕುಟುಂಬದ ಅಭ್ಯರ್ಥಿಗಳು :**

ಅಂಗವಿಕಲ ಅಭ್ಯರ್ಥಿ ಎಂದರೆ,

(ಎ) (ಅ) ಕಣ್ಣಿನ ದೃಷ್ಟಿಯನ್ನು ಸರಿಪಡಿಸುವ ಕನ್ನಡಕವನ್ನು ಹಾಕಿದಾಗ ಎರಡೂ ಕಣ್ಣಿನ ಪೈಕಿ ಉತ್ತಮವಾದ ಕಣ್ಣಿನಲ್ಲಿ 6:60 ಅಥವಾ 20:2000 (ಸ್ನೆಲನ್) ಅನ್ನು ಮೀರದಿರುವ ದೃಷ್ಟಿ ಸಾಮಾರ್ಥ್ಯ ಇರುವ ವ್ಯಕ್ತಿ.

(ಆ) 20 ಡಿಗ್ರಿಗಳು ಅಥವಾ ಅದಕ್ಕೂ ಕಡಿಮೆಯ ಕೋನದವರೆಗೆ ವಿಸ್ತರಿಸುವ ದೃಷ್ಟಿ ಕ್ಷೇತ್ರದ ಪರಿಮಿತಿಯನ್ನು ಹೊಂದಿರುವ ವ್ಯಕ್ತಿ.

(ಇ) ಸಂಪೂರ್ಣವಾಗಿ ದೃಷ್ಟಿ ಸಾಮರ್ಥ್ಯವನ್ನು ಕಳೆದುಕೊಂಡಿದ್ದವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

(ಬಿ) ಎಲ್ಲಾ ಸಂದರ್ಭಗಳಲ್ಲಿ ಜೋರಾಗಿ ಮಾತನಾಡುವುದು ಕೇಳಿಸುವ ಅಥವಾ ಅರ್ಥವಾಗದ ಅಥವಾ ಎರಡೂ ಕಿವಿಗಳ ಪೈಕಿ ಉತ್ತಮವಾದ ಕಿವಿಯ ಶ್ರವಣ ಶಕ್ತಿಯು 90 ಡೆಸಿಬಲ್‌ಗಳಿಗೂ ಹೆಚ್ಚು ತಗ್ಗಿರುವ (ಅತ್ಯಂತ ಕಡಿಮೆ ಶ್ರವಣ ಶಕ್ತಿಯು) ಅಥವಾ ಎರಡೂ ಕಿವಿಗಳು ಶ್ರವಣ ಶಕ್ತಿಯನ್ನು ಕಳೆದುಕೊಂಡಿರುವ ವ್ಯಕ್ತಿ ಅಥವಾ ಜೀವನದ ಸಾಮಾನ್ಯ ಉದ್ದೇಶಗಳ ಸಂಬಂಧದಲ್ಲಿ ಶ್ರವಣೇಂದ್ರೀಯ ನಿಷ್ಕ್ರಿಯವಾಗಿದ್ದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

(ಸಿ) ಮೂಳೆಗಳು, ಮಾಂಸಖಂಡಗಳು ಮತ್ತು ಕೀಲುಗಳು ವಾಡಿಕೆಯ ಕಾರ್ಯನಿರ್ವಹಣೆಗೆ ಅಡಚಣೆಯಾಗುವಂತಹ ದೈಹಿಕ ದೋಷ ಅಥವಾ ವಿಕಲತೆ ಹೊಂದಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ.

(ಡಿ) ರಾಜ್ಯದ ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿರುವ ವೈದ್ಯರು ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಅಧಿಕಾರ ಹೊಂದಿದವರಾಗಿರುತ್ತಾರೆ.

(ಇ) ದೈಹಿಕ ಅಂಗವಿಕಲತೆ ಒಳಪಡುವ ಅಭ್ಯರ್ಥಿಗಳು ಮೂಳೆ ತಜ್ಞ (ಆರ್ಥೋಪೆಡಿಕ್ ಸರ್ಜನ್) ರಿಂದ ದೈಹಿಕ ಅಂಗವಿಕಲತೆಯ ಮೌಲೀಕರಣವನ್ನು ಅಲ್ಮಿಕೊ ಕಾನ್‌ಪುರ್ (ಡಬ್ಲ್ಯೂ.ಎಚ್.ಓ. ಸ್ಟ್ಯಾಂಡರ್ಡ್) ಇದರ ಆಧಾರದ ಮೇಲೆ ಮಾಡಿಸುವುದು ಕಡ್ಡಾಯವಾಗಿರುತ್ತದೆ.

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19–11–2005 ರಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು ಮತ್ತು ಅಂಗವಿಕಲತೆ ಪ್ರಮಾಣವು ಶೇ.40 ರಿಂದ 75 ಕ್ಕಿಂತ ಹೆಚ್ಚಾಗಿರಬಾರದು. ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಅಭ್ಯರ್ಥಿಯು ಪಡೆದುಕೊಂಡಿರಬೇಕು.

20. **ಗ್ರಾಮೀಣ ಅಭ್ಯರ್ಥಿಗಳು :**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1 ನೇ ತರಗತಿಯಿಂದ 10 ನೇ ತರಗತಿವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ಧೃಡೀಕೃತ ಗ್ರಾಮೀಣ ಪತ್ರವನ್ನು ಲಗತ್ತಿಸ ತಕ್ಕದು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.

21. ಅಭ್ಯರ್ಥಿಯು ಕಂಪ್ಯೂಟರ್ ಜ್ಞಾನ ಹೊಂದಿರಬೇಕು ಹಾಗೂ ಪ್ರಮಾಣ ಪತ್ರವನ್ನು ಲಗತ್ತಿಸಿರಬೇಕು.

22. **ಅರ್ಹತಾ ಷರತ್ತುಗಳು :**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**23. ಕೆಳಕಂಡ ದಾಖಲೆಗಳನ್ನು ಅರ್ಜಿಯ ಜೊತೆಗೆ ಲಗತ್ತಿಸಿದೆಯೇ ಎಂದು ಖಚಿತಪಡಿಸಿಕೊಳ್ಳುವುದು**

- ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕ ಪಟ್ಟಿ, 2ನೇ ಪಿ.ಯು.ಸಿ / ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಮತ್ತು ಇತರೆ ತತ್ಸಮಾನ ವಿದ್ಯಾರ್ಹತೆ ಪ್ರಮಾಣ ಪತ್ರಗಳು
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆಯ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗ.
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಅನುಭವ/ತರಬೇತಿ ಪ್ರಮಾಣ ಪತ್ರಗಳು
- ಕಂಪ್ಯೂಟರ್ ಜ್ಞಾನ ಹೊಂದಿದ ಬಗ್ಗೆ ಪ್ರಮಾಣ ಪತ್ರ
- ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

**ಮೇಲ್ಕಂಡಂತೆ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**24. ಇತರೆ ಸೂಚನೆಗಳು:**

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಪೋಟೋ ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮರು ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

**ಸಹಿ/–**
**ಆಯುಕ್ತರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**